ಕೊಜೆಂಟ್ರಿಕ್ ವಿದ್ಯುತ್ ಯೋಜನೆ.

680 (1064)ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಜೆಂಟ್ರಿಕ್ಸ್ ವಿದ್ಯುತ್ ಯೋಜನೆಯು ಯಾವ ಹಂತದಲ್ಲಿದೆ?

ಆ) ಇದನ್ನು ಯಾವಾಗ ಅನುಷ್ಠಾನಗೊಳಿಸಲಾಗುವುದು?

ಶ್ರೀ ಶರಣಬಸಪ್ಪ ದರ್ಶನಾಪುರ (ಇಂಧನ ರಾಜ್ಯ ಸಚಿವರು) :

ಅ) ಸದ್ಯಕ್ಕೆ ಈ ಬಗ್ಗೆ ಸರ್ವೋಚ್ಚ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ವ್ಯಾಜ್ಯ ಎಂದು ಇತ್ಯರ್ಥ ಬಾಕಿ ಇದೆ. ಸರ್ವೋಚ್ಚ ನ್ಯಾಯಾಲಯವುದಾವೆಯನ್ನು ವಿಚಾರಣೆ ಮಾಡಿ ತೀರ್ಪನ್ನು ಕಾಯ್ದಿರಿಸಿದೆ. ಸರ್ವೋಚ್ಚ ನ್ಯಾಯಾಲಯದಲ್ಲಿ ಇತ್ಯರ್ಥ ಬಾಕಿ ಇರುವ ವ್ಯಾಜ್ಯದಿಂದಾಗಿ, ಕೇಂದ್ರ ಸರ್ಕಾರವೂ ಕೊಜೆಂಟ್ರಿಕ್ಸ್ ಕಂಪನಿಗೆ ನೀಡಬೇಕಿದ್ದ ಕೌಂಟರ್ ಗ್ಯಾರಂಟಿಯನ್ನು ನೀಡಿರುವುದಿಲ್ಲ. ಆದ್ದರಿಂದ, ಕಂಪನಿಯು ಈ ಯೋಜನೆಯನ್ನು ಅನುಷ್ಠಾನಗೊಳಿಸುವ ಸ್ಥಿತಿಯಲ್ಲಿಲ್ಲ. ಸರ್ವೋಚ್ಚ ನ್ಯಾಯಾಲಯವು ತನ್ನ ಮುಂದೆ ಬಾಕಿ ಇರುವ ವ್ಯಾಜ್ಯವನ್ನು ಇತ್ಯರ್ಥ ಪಡಿಸಿದ ನಂತರ ಹಾಗೂ ಭಾರತ ಸರ್ಕಾರವು ಕೊಜೆಂಟ್ರಿಕ್ಸ್ ಕಂಪನಿಗೆ ಕೌಂಟರ್ ಗ್ಯಾರಂಟಿ ನೀಡಿದ ತರುವಾಯ ಕಂಪನಿಯು ಯೋಜನೆಯನ್ನು ಅನುಷ್ಠಾನಗೊಳಿಸಲು ತೊಡಗಬಹುದಾಗಿದೆ.

ಆ) ಮೇಲಿನ'(ಅ)ಗೆ ನೀಡಿರುವ ಉತ್ತರದಿಂದಾಗಿ ಈ ಪ್ರಶ್ನೆ ಗೆ ನಿರ್ದಿಷ್ಟ ಉತ್ತರವನ್ನು ನೀಡುವುದು ಸಾಧ್ಯವಾಗುವುದಿಲ್ಲ.

ಸರ್ಕಾರಿ ಸ್ವಾಮ್ಯದ ಕಾರ್ಖಾನೆಗಳ ಆರ್ಥಿಕ ಪರಿಸ್ಥಿತಿ.

681 (1065) ಶ್ರೀ ಎಸ್.ಪಿ.ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದ ಸರ್ಕಾರಿ ಸ್ವಾಮ್ಯದಲ್ಲಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು?

ಆ) ಅ ಪೈಕಿ ಲಾಭದಲ್ಲಿ ನಡೆಯುತ್ತಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು?

ಇ) ನಷ್ಟ ಅನುಭವಿಸುತ್ತಿರುವ ಕಾರ್ಖಾನೆಗಳಾವುವು?

ಈ) 1998-99ರಲ್ಲಿ ಅನುಭವಿಸಿರುವ ನಷ್ಟವೆಷ್ಟು;

ಶ್ರೀ ಜೆ.ಹೆಚ್.ಪಟೇಲ್ (ಮುಖ್ಯಮಂತ್ರಿಗಳು) :

ಅ) ಕರ್ನಾಟಕ ರಾಜ್ಯ ಸಾರ್ವಜನಿಕ ಮಹೋದ್ಯಮದ ವ್ಯಾಪ್ತಿಯಲ್ಲಿ ಒಟ್ಟು 76 ಸಾರ್ವಜನಿಕ ಉದ್ಯಮಗಳು ಇವೆ.

ಆ) 1997-98ನೇ ಸಾಲಿನಲ್ಲಿ 35 ಉದ್ಯಮಗಳು 289.49 ಕೋಟಿ ರೂ. ಲಾಭಗಳಿಸಿರುತ್ತವೆ. ವಿವರಗಳನ್ನು ಅನುಬಂಧ-1ರಲ್ಲಿ ನೀಡಿದಂತೆ.